**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 41/2020**

**ಚಾ.ಸಾ. :- 13**
**ಪ್ರಾ.ಸಾ. :- 04**

| | | |
|---|---|---|
| ಹೆಸರು | : | ಅರುಣ.ಹೆಚ್.ಎಸ್. |
| ತಂದೆಯ ಹೆಸರು | : | ಸಂಜೀವೇಗೌಡ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ಹೆಚ್.ಸಿ-202, ಶ್ರೀ.ಗ್ರಾ.ಪೊ.ಠಾಣೆ |
| ವಾಸಸ್ಥಳ | : | ಶ್ರೀರಂಗಪಟ್ಟಣ. |

**ಪ್ರಮಾಣೀಕರಿಸಲಾದ ದಿನಾಂಕಃ- 08.12.2025**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2016 ರಿಂದ 2023 ರ ಅವಧಿಯಲ್ಲಿ ಶ್ರೀರಂಗಪಟ್ಟಣದ ನಗರ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 17.06.2019 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ, ಬೆಳಗ್ಗೆ 5.30 ಗಂಟೆಗೆ ಚಾ.ಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು **ನಿಪಿ-8** ಎಂದು ಸಾಕ್ಷಿಯ ಸಹಿಯನ್ನು **ನಿಪಿ-8(ಎ)** ಎಂದು ಗುರುತಿಸಲಾಯಿತು.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-15 ರವರು ಪಡೆದುಕೊಂಡಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ಚಾ.ಸಾ-1 ಬೆಳಿಗ್ಗೆ 5.00 ಗಂಟೆಗೆ ಠಾಣೆಗೆ ಬಂದಿದ್ದರು. ಚಾ.ಸಾ-1 ರವರು ಲಿಖಿತ ದೂರನ್ನು ನೀಡದೇ ಇದ್ದರೂ ಪರಿಹಾರಕ್ಕೆಂದು ದೂರನ್ನು ನಾವು ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**